Akashvani : Bangalore
National Bulletin In Kannada

04.04.2024 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*****************

ಮುಖ್ಯಾಂಶಗಳು

- ಲೋಕಸಭಾ ಚುನಾವಣೆ, ನೀತಿ ಸಂಹಿತೆ ಉಲ್ಲಂಘನೆ ಸಿ–ವಿಜಿಲ್ ಆ್ಯಪ್ ಮೂಲಕ ದೇಶಾದ್ಯಾಂತ 1.25 ಲಕ್ಷ ದೂರು ದಾಖಲು
- 89 ಲೋಕಸಭಾ ಕ್ಷೇತ್ರಗಳ ಚುನಾವಣೆಗೆ ಉಮೇದುವಾರಿಕೆ ಸಲ್ಲಿಕೆ ಪ್ರಕ್ರಿಯೆ ಇಂದು ಅಂತ್ಯ
- ದೇಶದ ಮೊಟ್ಟ ಮೊದಲ ಸ್ವದೇಶಿ ವಂಶವಾಹಿ ಚಿಕಿತ್ಸಾ ಪದ್ಧತಿಗೆ ರಾಷ್ಟ್ರಪತಿ ಚಾಲನೆ
- ಐಪಿಎಲ್ ಕ್ರಿಕೆಟ್: ಪಂಜಾಬ್ ಕಿಂಗ್ಸ್ – ಗುಜರಾತ್ ಟೈಟನ್ಸ್ ತಂಡಗಳ ನಡುವೆ ಮುಖಾಮುಖಿ

****************

ಲೋಕಸಭೆ ಚುನಾವಣೆಯ ಮಾದರಿ ನೀತಿ ಸಂಹಿತೆ ಉಲ್ಲಂಘನೆಗೆ ಸಂಬಂಧಿಸಿದಂತೆ ಮಾರ್ಚ್ 16 ರಿಂದ ಏಪ್ರಿಲ್ 3ರವರೆಗೆ 1.25 ಲಕ್ಷ ದೂರುಗಳು ಸಿ–ವಿಜಿಲ್ ಆ್ಯಪ್‌ನಲ್ಲಿ ದಾಖಲಾಗಿದೆ. ದೇಶದಲ್ಲಿ ಕರ್ನಾಟಕ ಮೂರನೇ ಸ್ಥಾನದಲ್ಲಿದೆ. ದಾಖಲಾದ ಒಟ್ಟು ದೂರುಗಳಲ್ಲಿ 1 ಲಕ್ಷದ 25 ಸಾವಿರದ 551 ವಿಲೇವಾರಿ ಮಾಡಲಾಗಿದೆ. ಅದರಲ್ಲೂ 1 ಲಕ್ಷದ 13 ಸಾವಿರ 481 ಆರೋಪಗಳನ್ನು 100 ನಿಮಿಷಗಳಲ್ಲಿ ಪರಿಹರಿಸಲಾಗಿದೆ. ಇನ್ನೂ 388 ದೂರುಗಳು ಇತ್ಯರ್ಥಪಡಿಸುವ ಪ್ರಕ್ರಿಯೆಯಲ್ಲಿವೆ ಎಂದು ಚುನಾವಣಾ ಆಯೋಗ ತಿಳಿಸಿದೆ.

ಚುನಾವಣೆಯ ಸಂದರ್ಭದಲ್ಲಿ ಅವ್ಯವಹಾರಗಳು ಕಂಡುಬಂದಲ್ಲಿ ದೂರು ನೀಡಲು ಚುನಾವಣಾ ಆಯೋಗ ಸಾರ್ವಜನಿಕರಿಗಾಗಿ ಸಿ–ವಿಜಿಲ್ ಆ್ಯಪ್ ಪರಿಚಯಿಸಿದೆ. ಇದರ ಮೂಲಕ ಜನರು ಚಿತ್ರ ಸಮೇತ ಅಕ್ರಮದ ಬಗ್ಗೆ ದೂರು ಸಲ್ಲಿಸಬಹುದು. ದೂರು ಬಂದ ಕೆಲವೇ ನಿಮಿಷಗಳಲ್ಲಿ ಸ್ಥಳೀಯ ಪೊಲೀಸರ ಗಮನಕ್ಕೆ ತಂದಲ್ಲಿ ಸ್ಥಳದಲ್ಲೇ ಪರಿಹಾರ ಸಿಗುತ್ತದೆ.

ಚುನಾವಣಾ ಆಯೋಗದ ಅಂಕಿ ಅಂಶಗಳ ಪ್ರಕಾರ, ಎಲ್ಲಾ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳ ಪೈಕಿ ನೀತಿ ಸಂಹಿತೆ ಜಾರಿಯಾದ 19 ದಿನಗಳಲ್ಲಿ ಕೇರಳದಲ್ಲಿ ಅತ್ಯಧಿಕ ದೂರುಗಳು ದಾಖಲಾಗಿವೆ.

ಸಿ–ವಿಜಿಲ್ ಆ್ಯಪ್ ಒಂದು ಬಳಕೆದಾರ ಸ್ನೇಹಿ ಮತ್ತು ಸುಲಭವಾಗಿ ಕಾರ್ಯನಿರ್ವಹಿಸುವ ಅಪ್ಲಿಕೇಶನ್ ಆಗಿದೆ. ಇದು ನಾಗರಿಕರ ಚುನಾವಣೆಯ ಸಂಬಂಧಿತ ದೂರುಗಳನ್ನು ಜಿಲ್ಲಾ ನಿಯಂತ್ರಣ ಕೊಠಡಿ, ಚುನಾವಣಾಧಿಕಾರಿ ಹಾಗೂ ಫ್ಲೈಯಿಂಗ್ ಸ್ಕ್ವಾಡ್ ತಂಡಗಳಿಗೆ ರವಾನಿಸುತ್ತದೆ. ಈ ಅಪ್ಲಿಕೇಶನ್ ಮೂಲಕ ಸಮಾಜದಲ್ಲಿ ಜಾಗೃತ ನಾಗರಿಕರು ರಾಜಕೀಯ ನಾಯಕರ ಭ್ರಷ್ಟಾಚಾರ, ಆಮಿಷ, ಅಕ್ರಮಗಳನ್ನು ತಕ್ಷಣ ಮತ್ತು ಚುನಾವಣಾಧಿಕಾರಿಗಳ ಕಚೇರಿಗೆ ಧಾವಿಸದೆ ನಿಮಿಷಗಳಲ್ಲಿ ವರದಿ ಮಾಡಬಹುದು. ಸಿ–ವಿಜಿಲ್ ಅಪ್ಲಿಕೇಶನ್‌ನಲ್ಲಿ ದೂರನ್ನು ಕಳುಹಿಸಿದ ತಕ್ಷಣ, ದೂರುದಾರರು ವಿಶಿಷ್ಟವಾದ ಐಡಿಯನ್ನು ಪಡೆದು, ಮೊಬೈಲ್‌ನಲ್ಲಿ ದೂರನ್ನು ಟ್ರ್ಯಾಕ್ ಮಾಡಬಹುದಾಗಿದೆ.

*****************

ಇದೇ ತಿಂಗಳ 26 ರಂದು ನಡೆಯಲಿರುವ ಎರಡನೇ ಹಂತದ 89 ಲೋಕಸಭಾ ಕ್ಷೇತ್ರಗಳ ಚುನಾವಣೆಗೆ ಉಮೇದುವಾರಿಕೆ ಸಲ್ಲಿಕೆ ಪ್ರಕ್ರಿಯೆ ಅಂತ್ಯಗೊಂಡಿದೆ.

ಈ ಹಂತದಲ್ಲಿ 12 ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ 89 ಲೋಕಸಭಾ ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ದಕ್ಷಿಣ ಕರ್ನಾಟಕ ಭಾಗದ 14, ಕೇರಳದ 20, ರಾಜಸ್ಥಾನದ 13, ಉತ್ತರ ಪ್ರದೇಶ ಹಾಗೂ ಮಹಾರಾಷ್ಟ್ರದ ತಲಾ 8 ಸ್ಥಾನಗಳು, ಮಧ್ಯಪ್ರದೇಶದ 7, ಅಸ್ಸಾಂ, ಬಿಹಾರ ತಲಾ 5 ಸ್ಥಾನಗಳು, ಪಶ್ಚಿಮ ಬಂಗಾಳ, ಛತ್ತೀಸ್‌ಗಢದ 3 ಸ್ಥಾನಗಳು, ಮಣಿಪುರ, ತ್ರಿಪುರ ಹಾಗೂ ಜಮ್ಮು–ಕಾಶ್ಮೀರದಲ್ಲಿ ತಲಾ 1 ಸ್ಥಾನಗಳಿಗೆ ಎರಡನೇ ಹಂತದಲ್ಲಿ ಚುನಾವಣೆ ನಡೆಯಲಿದೆ.

ಕರ್ನಾಟಕದಲ್ಲಿ ಇದೇ 26ರಂದು ನಡೆಯಲಿರುವ 14 ಲೋಕಸಭಾ ಕ್ಷೇತ್ರಗಳ ಚುನಾವಣೆಗೆ ಉಮೇದುವಾರಿಕೆ ಸಲ್ಲಿಕೆ ಪ್ರಕ್ರಿಯೆ ಇಂದು ಅಂತ್ಯಗೊಂಡಿದೆ. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಿಂದ ಬಿಜೆಪಿಯ ತೇಜಸ್ವಿ ಸೂರ್ಯ, ತುಮಕೂರು ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್‌ನ ಎಸ್.ಪಿ.ಮುದ್ದಹನುಮೇಗೌಡ, ಮಂಡ್ಯ ಲೋಕಸಭಾ ಕ್ಷೇತ್ರದಿಂದ ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಎಚ್.ಡಿ. ಕುಮಾರಸ್ವಾಮಿ, ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಡಾ.ಸಿ.ಎನ್. ಮಂಜುನಾಥ್ ನಾಮಪತ್ರ ಸಲ್ಲಿಸಿದರು.

ಚಿಕ್ಕಬಳ್ಳಾಪುರದಿಂದ ಬಿಜೆಪಿ ಅಭ್ಯರ್ಥಿಯಾಗಿ ಡಾ.ಕೆ.ಸುಧಾಕರ್, ಚಿತ್ರದುರ್ಗದಿಂದ ಗೋವಿಂದ ಕಾರಜೋಳ, ಹಾಸನ ಲೋಕಸಭಾ ಕ್ಷೇತ್ರದಿಂದ ಜೆಡಿಎಸ್ ನಿಂದ ಪ್ರಜ್ವಲ್ ರೇವಣ್ಣ, ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿ ಕ್ಯಾಪ್ಟನ್ ಬ್ರಿಜೇಶ್ ಚೌಟಾ, ಕೋಲಾರ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಗೌತಮ್ ಹಾಗೂ ಜೆಡಿಎಸ್ ಅಭ್ಯರ್ಥಿಯಾಗಿ ಮಲ್ಲೇಶ್ ಬಾಬು ಇಂದು ಉಮೇದುವಾರಿಕೆ ಸಲ್ಲಿಸಿದರು. ಚಿತ್ರದುರ್ಗದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪ ಪರವಾಗಿ ಮತಯಾಚಿಸಿದರು.

ನಾಳೆ ನಾಮಪತ್ರ ಪರಿಶೀಲನೆ ನಡೆಯಲಿದ್ದು, ಇದೇ 8 ರಂದು ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದೆ.

*****************

ಬಿಜೆಪಿಯ ಚುನಾವಣಾ ಪ್ರಣಾಳಿಕೆ ಸಮಿತಿ ಸಭೆ ನವದೆಹಲಿಯ ಪಕ್ಷದ ಕೇಂದ್ರ ಕಚೇರಿಯಲ್ಲಿ ನಡೆಯುತ್ತಿದೆ. ಸಮಿತಿ, ಮುಂದಿನ ಲೋಕಸಭಾ ಚುನಾವಣೆಗೆ ಪಕ್ಷದ ಪ್ರಣಾಳಿಕೆಯನ್ನು ಅಂತಿಮಗೊಳಿಸಲಿದೆ.

ಪಕ್ಷದ ಹಿರಿಯ ನಾಯಕ ರಾಜನಾಥ್ ಸಿಂಗ್ ನೇತೃತ್ವದ 27 ಸದಸ್ಯರ ಪ್ರಣಾಳಿಕೆ ಸಮಿತಿಯ ಎರಡನೇ ಸಭೆ ಇದಾಗಿದೆ. ಸಭೆಯಲ್ಲಿ ಪಕ್ಷದ ಹಿರಿಯ ನಾಯಕರಾದ ನಿರ್ಮಲಾ ಸೀತಾರಾಮನ್, ಅಶ್ವಿನಿ ವೈಷ್ಣವ್, ಕಿರಣ್ ರಿಜಿಜು ಮತ್ತಿತರರು ಭಾಗವಹಿಸಿದ್ದಾರೆ.

ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ತನ್ನ ಪ್ರಣಾಳಿಕೆಯನ್ನು ನಾಳೆ ಬಿಡುಗಡೆ ಮಾಡಲಿದೆ. ಪಕ್ಷದ ಅಧ್ಯಕ್ಷ ಎಂ.ಮಲ್ಲಿಕಾರ್ಜುನ ಖರ್ಗೆ, ಪಕ್ಷದ ಹಿರಿಯ ನಾಯಕ ರಾಹುಲ್ ಗಾಂಧಿ ಪ್ರಣಾಳಿಕೆ ಬಿಡುಗಡೆ ಮಾಡಲಿದ್ದಾರೆ.

******************

ರಾಷ್ಟ್ರಪತಿ ದ್ರೌಪದಿ ಮುರ್ಮು ಮುಂಬೈನ ಬಾಂಬೆ ಇಂಡಿಯನ್ ಇನ್ಸ್ಟ್ಯೂಟ್ ಆಫ್ ಟೆಕ್ನಾಲಜಿ ಸಂಸ್ಥೆಯಲ್ಲಿಂದು ಭಾರತದ ಮೊಟ್ಟ ಮೊದಲ ಸ್ವದೇಶಿ ವಂಶವಾಹಿ ಚಿಕಿತ್ಸಾ ಪದ್ಧತಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿಗಳು, ಸಿಎಆರ್–ಟಿ ಸೆಲ್ ಥೆರಪಿ ಸುಲಭವಾಗಿ ಪಡೆಯಲು ಹಾಗೂ ಅಗ್ಗದ ವೆಚ್ಚದಲ್ಲಿ ಲಭ್ಯವಾಗುವ ಮೂಲಕ ಇಡೀ ಮಾನವ ಕುಲಕ್ಕೆ ಹೊಸ ಭರವಸೆ ನೀಡುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಭಾರತದ ಮೊದಲ ವಂಶವಾಹಿ ಚಿಕಿತ್ಸೆ ಅಸಂಖ್ಯಾತ ರೋಗಿಗಳಿಗೆ ಹೊಸ ಜೀವನ ಕಲ್ಪಿಸುವಲ್ಲಿ ಸಫಲವಾಗಲಿದೆ ಎಂದು ನುಡಿದರು.

ಈ ಚಿಕಿತ್ಸೆ ಭಾರತವನ್ನು ಸುಧಾರಿತ ವೈದ್ಯಕೀಯ ಆರೈಕೆಯ ಜಾಗತಿಕ ನಕ್ಷೆಯಲ್ಲಿ ಹಾಗೂ ಅತ್ಯಾಧುನಿಕ ತಂತ್ರಜ್ಞಾನ ವೇದಿಕೆಗೆ ಪ್ರವೇಶ ಪಡೆದಿರುವ ಉನ್ನತ ದೇಶಗಳ ಸಾಲಿಗೆ ಸೇರ್ಪಡೆಗೊಳಿಸಲಿದೆ ಎಂದು ಹೇಳಿದರು.

ಐಐಟಿ ಬಾಂಬೆ ಕ್ಯಾನ್ಸರ್ ರೋಗಿಗಳಿಗಾಗಿ ಸಿಎಆರ್–ಟಿ ಸೆಲ್ ಥೆರಫಿಯನ್ನು ಅಭಿವೃದ್ಧಿಪಡಿಸಿದೆ. ಟಾಟಾ ಮೆಮೊರಿಯಲ್ ಸೆಂಟರ್ ಸಹಯೋಗದಲ್ಲಿ ಅಭಿವೃದ್ಧಿಪಡಿಸಿರುವ ಈ ಚಿಕಿತ್ಸೆ ಕಡಿಮೆ ವೆಚ್ಚದಲ್ಲಿ ರೋಗಿಗಳ ಜೀವ ಉಳಿಸಲು ಸಹಕಾರಿಯಾಗಲಿದೆ.

ಕಾರ್ಯಕ್ರಮದಲ್ಲಿ ಮಹಾರಾಷ್ಟ್ರ ರಾಜ್ಯಪಾಲ ರಮೇಶ್ ಬೈಸ್ ಉಪಸ್ಥಿತರಿದ್ದರು.

******************

ಅಬಕಾರಿ ನೀತಿ ಹಗರಣ ಸಂಬಂಧಿತ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯದಿಂದ ಬಂಧಿತರಾಗಿರುವ ಬಿಆರ್‌ಎಸ್ ನಾಯಕಿ ಕೆ.ಕವಿತಾ ಅವರು ಸಲ್ಲಿಸಿರುವ ಮಧ್ಯಂತರ ಜಾಮೀನು ಅರ್ಜಿ ಸಂಬಂಧ ದೆಹಲಿ ನ್ಯಾಯಾಲವೊಂದು ತನ್ನ ಆದೇಶವನ್ನು ಕಾಯ್ದಿರಿಸಿದೆ.

ವಿಶೇಷ ಸಿಬಿಐ ನ್ಯಾಯಾಧೀಶೆ ಕಾವೇರಿ ಬವೇಜಾ ಆದೇಶವನ್ನು ಸೋಮವಾರ ಪ್ರಕಟಿಸಲಿದ್ದಾರೆ. ಕವಿತಾ ಅವರನ್ನು ಏಪ್ರಿಲ್ 9ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿತ್ತು.

******************

ಕರ್ನಾಟಕದ ವಿಜಯಪುರ ಜಿಲ್ಲೆಯಲ್ಲಿ ಕೊಳವೆ ಬಾವಿಗೆ ಬಿದ್ದಿದ್ದ ಪುಟ್ಟ ಮಗುವನ್ನು 18 ಗಂಟೆಗಳ ರಕ್ಷಣಾ ಕಾರ್ಯಾಚರಣೆ ನಂತರ ಬಾವಿಯಿಂದ ಹೊರತೆಗೆಯಲಾಗಿದೆ. ನಿನ್ನೆ ಸಂಜೆ ಮಗು ತೆರೆದ ಕೊಳವೆ ಬಾವಿಗೆ ಬಿದ್ದಿತ್ತು. ಕೂಡಲೇ ಕಾರ್ಯಪ್ರವೃತ್ತರಾದ ಜಿಲ್ಲಾಡಳಿತ ರಕ್ಷಣಾ ಕಾರ್ಯಾಚರಣೆ ಆರಂಭಿಸಿ 18 ಗಂಟೆಗಳ ನಂತರ ಮಗುವನ್ನು ಬಾವಿಯಿಂದ ಹೊರತೆಗೆಯುವಲ್ಲಿ ಯಶಸ್ವಿಯಾಗಿದೆ. ಸದ್ಯ ಮಗುವಿಗೆ ಆಸ್ಪತ್ರೆಯಲ್ಲಿ ಮಗುವಿಗೆ ಚಿಕಿತ್ಸೆ ನೀಡಲಾಗುತ್ತಿದೆ.

ಮಗುವಿನ ರಕ್ಷಣೆಗಾಗಿ ಹಗಲಿರುಳೆನ್ನದೆ ಶ್ರಮಿಸಿದ ರಕ್ಷಣಾ ಸಿಬ್ಬಂದಿಯನ್ನು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಅನೇಕ ಸಚಿವರು ಹಾಗೂ ಪ್ರಮುಖ ರಾಜಕೀಯ ನಾಯಕರು ಅಭಿನಂದಿಸಿದ್ದಾರೆ.

******************

ರಾಜ್ಯಸಭೆಗೆ ಹೊಸದಾಗಿ ಚುನಾಯಿತರಾದ 14 ಮಂದಿ ಸದಸ್ಯರು ಇಂದು ಪ್ರಮಾಣ ವಚನ ಸ್ವೀಕರಿಸಿದರು. ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಇವರಲ್ಲಿ ಸೇರಿದ್ದಾರೆ. ಸೋನಿಯಾ ಗಾಂಧಿ ಅವರು ರಾಜಸ್ಥಾನದಿಂದ ಅವಿರೋಧವಾಗಿ ಆಯ್ಕೆಯಾದರೆ, ಅಶ್ವಿನಿ ವೈಷ್ಣವ್ ಒಡಿಶಾದಿಂದ ಆಯ್ಕೆಯಾಗಿದ್ದಾರೆ. ರಾಜ್ಯಸಭಾ ಸಭಾಪತಿಗಳೂ ಆಗಿರುವ ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು ಮೇಲ್ಮನೆಯ ಹೊಸ ಸದಸ್ಯರಿಗೆ ಪ್ರಮಾಣ ವಚನ ಬೋಧಿಸಿದರು.
ಕರ್ನಾಟಕದಿಂದ ಕಾಂಗ್ರೆಸ್ ನಾಯಕ ಅಜಯ್ ಮಾಕನ್, ಉತ್ತರ ಪ್ರದೇಶದ ಭಾರತೀಯ ಜನತಾ ಪಕ್ಷದ ನಾಯಕ ಆರ್‌ಪಿಎನ್ ಸಿಂಗ್ ಮತ್ತು ಪಶ್ಚಿಮ ಬಂಗಾಳದ ಬಿಜೆಪಿ ಸದಸ್ಯ ಸಮಿಕ್ ಭಟ್ಟಾಚಾರ್ಯ ಕೂಡ ಪ್ರಮಾಣ ವಚನ ಸ್ವೀಕರಿಸಿದರು. ಇವರ ಜೊತೆಗೆ ವೈಎಸ್‌ಆರ್‌ಸಿಪಿ ನಾಯಕರಾದ ಗೋಲಾ ಬಾಬು ರಾವ್, ಮೇಧಾ ರಘುನಾಥ್ ರೆಡ್ಡಿ ಮತ್ತು ಯೆರುಂ ವೆಂಕಟ್ ಸುಬ್ಬಾ ರೆಡ್ಡಿ ಅವರು ಆಂಧ್ರಪ್ರದೇಶ ಪ್ರತಿನಿಧಿಸುವ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದರು. ರಾಜ್ಯಸಭೆಯ ನಾಯಕ ಪಿಯೂಷ್ ಗೋಯಲ್, ರಾಜ್ಯಸಭೆಯ ಪ್ರತಿಪಕ್ಷದ ನಾಯಕರೂ ಆಗಿರುವ ಕಾಂಗ್ರೆಸ್ ಅಧ್ಯಕ್ಷ ಎಂ. ಮಲ್ಲಿಕಾರ್ಜುನ ಖರ್ಗೆ ರಾಜ್ಯಸಭಾ ಉಪಸಭಾಪತಿ ಹರಿವಂಶ್ ನಾರಾಯಣ ಸಿಂಗ್ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

******************

ಬಿಜೆಪಿಯ ಹಿರಿಯ ನಾಯಕರೂ ಆಗಿರುವ ಪ್ರಧಾನಿ ನರೇಂದ್ರ ಮೋದಿ ಅವರು ಬಿಹಾರದ ಜಮುಯ್‌ನಲ್ಲಿಂದು ಎನ್‌ಡಿಎ ಚುನಾವಣಾ ಪ್ರಚಾರಕ್ಕೆ ಚಾಲನೆ ನೀಡಿದರು.

ಬಳಿಕ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಭವಿಷ್ಯದ ದೃಷ್ಟಿಯಿಂದ ಹಾಗೂ ವಿಕಸಿತ ಭಾರತದ ಸಂಕಲ್ಪ ಸಾಕಾರಗೊಳಿಸುವ ನಿಟ್ಟಿನಲ್ಲಿ ಪ್ರಸಕ್ತ ಚುನಾವಣೆ ನಿರ್ಣಾಯಕವಾಗಿದೆ ಎಂದರು.

ಕಳೆದ 10 ವರ್ಷಗಳಲ್ಲಿ ಭಾರತ ಜಗತ್ತಿಗೆ ಮಾರ್ಗದರ್ಶಿಯಾಗುವ ರೀತಿಯಲ್ಲಿ ಅಭಿವೃದ್ಧಿಗೊಂಡಿದ್ದು, 5ನೇ ಅತಿದೊಡ್ಡ ಆರ್ಥಿಕತೆಯ ರಾಷ್ಟ್ರವಾಗಿದೆ. ದೇಶದಲ್ಲಿ ಆಯೋಜಿಸಲಾದ ಜಿ20 ಶೃಂಗಸಭೆ ಬಗ್ಗೆ ಜಾಗತಿಕ ಶ್ಲಾಘನೆ ವ್ಯಕ್ತವಾಗಿದೆ. ಚಂದ್ರನ ಮತ್ತೊಂದು ಬದಿಗೆ ಯಾರೂ ತಲುಪದಿದ್ದ ತಾಣಕ್ಕೆ ತಲುಪುವ ಮೂಲಕ ಭಾರತ ಬಾಹ್ಯಾಕಾಶದಲ್ಲಿ ಅಪೂರ್ವ ಸಾಧನೆ ಮಾಡಿದೆ ಎಂದರು.

******************

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಐಪಿಎಲ್ ಟಿ-20 ಕ್ರಿಕೆಟ್ ಟೂರ್ನಿಯಲ್ಲಿಂದು ಪಂಜಾಬ್ ಕಿಂಗ್ಸ್ ಹಾಗೂ ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಿದ್ದು, ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

*********ಮುಕ್ತಾಯ*********